# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 594

ಸದಸ್ಯರ ಹೆಸರು : ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 23-12-2022

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರೈತ ಶಕ್ತಿ ಯೋಜನೆಯಲ್ಲಿ ರೈತರ ಯಂತ್ರೋಪಕರಣಗಳಿಗೆ ಸಬ್ಸಿಡಿ ದರದಲ್ಲಿ ಡೀಸೆಲ್ ನೀಡಲು 600 ಕೋಟಿ ಅನುದಾನ ಮೀಸಲಿರಿಸುವುದಾಗಿ ಬಜೆಟ್ ನಲ್ಲಿ ಘೋಷಿಸಲಾಗಿದ್ದು, ಇದರಲ್ಲಿ ಇಲ್ಲಿಯವರೆಗೆ ಎಷ್ಟು ಹಣವನ್ನು ಸಬ್ಸಿಡಿ ರೂಪದಲ್ಲಿ ನೀಡಲಾಗಿದೆ; | ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವಲ್ಲಿ ರೈತರು ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಡೀಸೆಲ್ ಗೆ ಸಹಾಯಧನವನ್ನು ನೀಡಲು ರಾಜ್ಯದಲ್ಲಿಯೇ ಮೊಟ್ಟ ಮೊದಲ ಬಾರಿಗೆ "ರೈತ ಶಕ್ತಿ" ಎಂಬ ಹೊಸ ಯೋಜನೆಯನ್ನು 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿರುತ್ತದೆ.<br><br>2022-23ನೇ ಸಾಲಿನ ಆಯವ್ಯಯದಲ್ಲಿ ರೈತ ಶಕ್ತಿ ಯೋಜನೆಗೆ ರೂ.400.00 ಕೋಟಿಗಳ ಅನುದಾನ ಒದಗಿಸಿದ್ದು, ಇದುವರೆವಿಗೂ ಒಟ್ಟಾರೆ ರೂ. 100.08 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಈ ಕಾರ್ಯಕ್ರಮವನ್ನು FRUITS ತಂತ್ರಾಂಶದಲ್ಲಿ ಅಳವಡಿಸಿ ನೇರ ನಗದು ವರ್ಗಾವಣೆ (DBT) ಮುಖಾಂತರ ಅನುಷ್ಠಾನ ಮಾಡಲಾಗುತ್ತಿದೆ.<br><br>FRUITS ತಂತ್ರಾಂಶದಲ್ಲಿ ಫಲಾನುಭವಿಗಳ ಆಯ್ಕೆ ಕಾರ್ಯ ಪ್ರಗತಿಯಲ್ಲಿದ್ದು, ಘೋಷಣೆಯಂತೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಕ್ರಮ ಕೈಗೊಳ್ಳಲಾಗಿದೆ. |
| ಆ) | ಕೆಪೆಕ್ ಮೂಲಕ ಕೃಷಿ ಉತ್ಪನ್ನಗಳ ನಿರ್ವಹಣೆ ಮತ್ತು ರಫ್ತು ಉತ್ತೇಜನಕ್ಕೆ ಮೀಸಲಿರಿಸಿರುವ 50 ಕೋಟಿಯಲ್ಲಿ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; | ಕೆಪೆಕ್ ಮೂಲಕ ಕೃಷಿ ಉತ್ಪನ್ನಗಳ ನಿರ್ವಹಣೆ ಮತ್ತು ರಫ್ತು ಉತ್ತೇಜನಕ್ಕೆ ಮೀಸಲಿರಿಸಿರುವ ರೂ.50.00 ಕೋಟಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಕೃಇ/42/ ಕೃರಾಗೊ/2022(1), ದಿನಾಂಕ 24-06-2022ರಲ್ಲಿ ಸದರಿ ಯೋಜನೆಗೆ ರೂ.5.00 ಕೋಟಿಗಳ ಅನುದಾನ ಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು ಹಾಗೂ ಇನ್ನುಳಿದ ಅನುದಾನವನ್ನು ಒಮ್ಮುಖ ಮತ್ತು ಸಾಂಸ್ಥಿಕ ಜವಾಬ್ದಾರಿ (Convergence and Corporate Social Responsibility) ಮೂಲಕ ಹೊಂದಿಸಕೊಳ್ಳತಕ್ಕದ್ದು ಎಂದು ತಿಳಿಸಲಾಗಿದೆ. ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಇಲ್ಲಿಯವರೆಗೂ ರೂ.2.50 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

<table>
<tr>
<td>ಇ)</td>
<td>ಕೃಷಿ ಇಲಾಖೆಯ ಒಟ್ಟು 33700 ಕೋಟಿ ರೂಪಾಯಿ ಬಜೆಟ್ ನಲ್ಲಿ ನವೆಂಬರ್ 2022ರ ಅಂತ್ಯಕ್ಕೆ ಖರ್ಚಾಗಿರುವ ಒಟ್ಟು ಮೊತ್ತವೆಷ್ಟು?</td>
<td>2022-23ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಇಲಾಖೆಗೆ ಒದಗಿಸಲಾದ ಅನುದಾನ ಹಾಗೂ ವೆಚ್ಚದ ನವೆಂಬರ್ 2022ರ ಅಂತ್ಯಕ್ಕೆ ವಿವರಗಳು ಈ ಕೆಳಕಂಡಂತಿವೆ;<br>(ರೂ. ಲಕ್ಷಗಳಲ್ಲಿ)
<table>
<tr><th>ವಾರ್ಷಿಕ ಅನುದಾನ (BE)</th><th>ವಾರ್ಷಿಕ ಅನುದಾನ (RE)</th><th>ಬಿಡುಗಡೆ</th><th>ವೆಚ್ಚ</th></tr>
<tr><td>576585.69</td><td>654586.09</td><td>204529.53</td><td>102715.22</td></tr>
</table>
</td>
</tr>
</table>

**ಸಂಖ್ಯೆ:** AGRI-ASC/102/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು